ಕರ್ನಾಟಕ ಸರ್ಕಾರ

# ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು-560009

---

ಸಂಖ್ಯೆ: ಕೆಪಿಆರ್‌ಸಿ-ಜಿಪಿಎ-369-2023-ಡಿಡಿ3 ದಿನಾಂಕ:25-08-2023

ಇವರಿಗೆ:

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೇ,

ವಿಷಯ: ದಿನಾಂಕ:09-08-2023ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನೀಡಿದ ಸೂಚನೆಯಂತೆ ಕ್ರಮವಹಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು-1), ಇವರ ಟಿಪ್ಪಣಿ ಸಂಖ್ಯೆ:ಸಿಆಸುಇ 20 ಸೇನಿಎ 2023, ದಿನಾಂಕ:08-06-2023.
2. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು-1), ಇವರ ಟಿಪ್ಪಣಿ ಸಂಖ್ಯೆ:ಸಿಆಸುಇ 251 ಸೇನಿಎ 2020, ದಿನಾಂಕ:12-01-2021.

=====

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:09-08-2023ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳು, ಕಾರ್ಯಕ್ರಮಗಳ ಕುರಿತು ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಪರಿಶೀಲನಾ ಸಭೆಯಲ್ಲಿ, ರಾಜ್ಯದಲ್ಲಿನ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರುಗಳು ಪ್ರತಿ ತಿಂಗಳ ಎರಡನೇ ಬುಧವಾರದಂದು ವ್ಯಾಪಕ ಪ್ರಚಾರ ನೀಡುವ ಮೂಲಕ, ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ, ಗ್ರಾಮ ಪಂಚಾಯತಿಯ ಶಾಸನಬದ್ಧ ಕಾರ್ಯಗಳ ಅನುಷ್ಠಾನ, ಅಲ್ಲಿನ ಕಾರ್ಯವೈಖರಿ, ಯೋಜನೆ/ ಕಾರ್ಯಕ್ರಮಗಳ ಅನುಷ್ಠಾನ, ಇವುಗಳ ಬಗ್ಗೆ ಪರಿಶೀಲಿಸಿ, ಸಾರ್ವಜನಿಕ ಸಮಸ್ಯೆಗಳ

ಕುರಿತು ದೂರು-ಮನವಿಗಳನ್ನು ಸ್ವೀಕರಿಸಿ, ಅವುಗಳನ್ನು ಆದ್ಯತೆ ಮೇರೆಗೆ ಪರಿಗಣಿಸಿ, ಇತ್ಯರ್ಥಗೊಳಿಸಲು ಮಾನ್ಯ ಸಚಿವರು ಸೂಚಿಸಿರುತ್ತಾರೆ.

ಅದರಂತೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರತಿ ತಿಂಗಳ ಎರಡನೇ ಬುಧವಾರಗಳಂದು ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡುವ ಕುರಿತಾದ ಕಾರ್ಯಕ್ರಮವನ್ನು ತಮ್ಮ ದಿನಚರಿಗಳಲ್ಲಿ ಅಳವಡಿಸಿ, ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ, ಮೇಲಿನಂತೆ ಕ್ರಮವಹಿಸಿ, ಕೈಗೊಂಡ ಕ್ರಮಗಳ ಬಗ್ಗೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಅದರ ಪ್ರತಿಯನ್ನು ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ಸಲ್ಲಿಸುವಂತೆ ತಿಳಿಸಿದೆ.

ತಮ್ಮ ವಿಶ್ವಾಸಿ,

**ಆಯುಕ್ತರು,**
ಪಂಚಾಯತ್ ರಾಜ್ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

25/8/2023

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಐ.ಟಿ.ಪಾರ್ಕ್, ರಾಜಾಜಿನಗರ, ಬೆಂಗಳೂರು.
5. ನಿರ್ದೇಶಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಹೆಚ್ಚುವರಿ/ ಕಚೇರಿ ಪ್ರತಿ.